# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 191
ಸದಸ್ಯರ ಹೆಸರು : ಶ್ರೀ ಸಿ.ಎನ್.ಮಂಜೇಗೌಡ
ಉತ್ತರಿಸುವ ಸಚಿವರು :ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 28.01.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಮೈಸೂರು ನಗರದ ಸಾಂಸ್ಕೃತಿಕ ಪರಂಪರೆ ಮತ್ತು ಪ್ರವಾಸೋದ್ಯಮವನ್ನು ಗಮನದಲ್ಲಿಟ್ಟುಕೊಂಡು, ನಗರದ ಸಾರಿಗೆ ದಟ್ಟಣೆ ಕಡಿಮೆ ಮಾಡಲು ಜಾರಿಗೆ ತರಲು ಉದ್ದೇಶಿಸಿರುವ 'ಪಾರಂಪರಿಕ ಸಾರಿಗೆ ವ್ಯವಸ್ಥೆ' ಅಥವಾ ಎಲೆಕ್ಟ್ರಿಕ್ ಬಸ್‌ಗಳ ವಿಸ್ತರಣೆಯ ಪ್ರಸ್ತುತ ಹಂತವೇನು; | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ವ್ಯಾಪ್ತಿಯ ಮೈಸೂರು ನಗರದಲ್ಲಿನ ಜನದಟ್ಟಣೆಗೆ ಅನುಗುಣವಾಗಿ ಮೈಸೂರು ನಗರ ಸಾರಿಗೆ ವಿಭಾಗದಿಂದ ಮೈಸೂರು ನಗರದಲ್ಲಿ ಪ್ರಸ್ತುತ ಪ್ರತಿ ದಿನ 131 ನಗರ ಸಾರಿಗೆ ಅನುಸೂಚಿಗಳಿಂದ 2,243 ಏಕಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>PM e-Bus Sewa ಯೋಜನೆಯಡಿಯಲ್ಲಿ 100 ಸಂಖ್ಯೆಯ ವಿದ್ಯುತ್ ಚಾಲಿತ ಬಸ್ಸುಗಳು ಮಂಜೂರಾಗಿದ್ದು, ಸದರಿ 100 ಬಸ್ಸುಗಳ Detailed Project Report (DPR)ನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಮುಂದುವರೆದು, ವಿದ್ಯುತ್ ಸಂಪರ್ಕ ಮತ್ತು ಮೂಲಭೂತ ಸೌಲಭ್ಯವನ್ನು ಒದಗಿಸಲು ಕೇಂದ್ರ ಪ್ರಾಯೋಜಿತ ಯೋಜನೆಗಳಡಿ ಅನುದಾನ ಬಿಡುಗಡೆಗೆ ಅನುವಾಗಲು SNA Single Nodal Account & Zero Balance Subsidiary Account ತೆರೆಯುವ ಪ್ರಸ್ತಾವನೆಯು ಪ್ರಸ್ತುತ ಪರಿಶೀಲನೆಯಲ್ಲಿರುತ್ತದೆ. |
| ಆ. | ಶಕ್ತಿ' ಯೋಜನೆಯಡಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಮಹಿಳಾ ಪ್ರಯಾಣಿಕರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು, ಇದಕ್ಕೆ ಪೂರಕವಾಗಿ ಹಳೆಯ ಬಸ್‌ಗಳ ಬದಲಿಗೆ ಹೊಸ ಬಸ್‌ಗಳನ್ನು ಮಂಜೂರು ಮಾಡಲು ಸರ್ಕಾರ ಕಾಲಮಿತಿಯನ್ನು ನಿಗದಿಪಡಿಸಿದೆಯೇ: | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವ್ಯಾಪ್ತಿಯಲ್ಲಿ ಬರುವ ಮೈಸೂರು ನಗರ, ಮೈಸೂರು ಗ್ರಾಮಾಂತರ ಹಾಗೂ ಚಾಮರಾಜನಗರ ವಿಭಾಗಗಳಿಗೆ ಶಕ್ತಿ ಯೋಜನೆ ಅಡಿಯಲ್ಲಿ ಮಹಿಳಾ ಪ್ರಯಾಣಿಕರಿಗೆ ಅನುಕೂಲವಾಗಲು 2023-24 ಮತ್ತು 2024-25ನೇ ಸಾಲಿನಲ್ಲಿ ನಿಯೋಜಿಸಿರುವ ಹೊಸ ಬಸ್‌ಗಳ ವಿವರ ಕೆಳಕಂಡಂತಿದೆ:<br><br>**ವಿಭಾಗ** — **ಬಸ್‌ಗಳ ಸಂಖ್ಯೆ**<br>ಮೈಸೂರು ನಗರ — 69<br>ಮೈಸೂರು ಗ್ರಾಮಾಂತರ — 88<br>ಚಾಮರಾಜನಗರ — 65<br>**ಒಟ್ಟು** — **222** |
| ಇ. | ಚಾಮರಾಜನಗರ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಸಾರಿಗೆ ಸಂಸ್ಥೆಯ ಬಸ್‌ಗಳ ಕೊರತೆಯಿಂದ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಚಾಮರಾಜನಗರ ಜಿಲ್ಲೆಯಲ್ಲಿ ಚಾಮರಾಜನಗರ, ಯಳಂದೂರು, ಹನೂರು, ಕೊಳ್ಳೆಗಾಲ ಮತ್ತು ಗುಂಡ್ಲುಪೇಟೆ ತಾಲ್ಲೂಕುಗಳ ಗ್ರಾಮಾಂತರ ಪ್ರದೇಶಗಳಿಗೆ ನಿಗಮದ ವತಿಯಿಂದ ಪ್ರತಿದಿನ 99 ಸಾಮಾನ್ಯ ಅನುಸೂಚಿಗಳಿಂದ 922 ಏಕ ಸುತ್ತುವಳಿಗಳನ್ನು ಹಾಗೂ 318 ವೇಗದೂತ ಅನುಸೂಚಿಗಳಿಂದ 1527 ಏಕ ಸುತ್ತುವಳಿಗಳನ್ನು ಸೇರಿದಂತೆ ಒಟ್ಟು 417 ಅನುಸೂಚಿಗಳಿಂದ 2449 ಏಕ ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಸದರಿ ಸಾರಿಗೆಗಳ |
| ಈ. | ಬಂದಿದ್ದಲ್ಲಿ, . ಮುಂದಿನ ಶೈಕ್ಷಣಿಕ ಸಾಲಿನಲ್ಲಿ ಈ ಜಿಲ್ಲೆಗಳಿಗೆ ಎಷ್ಟು ಹೊಸ ಬಸ್‌ಗಳನ್ನು ಮಂಜೂರು ಮಾಡಲು ಉದ್ದೇಶಿಸಲಾಗಿದೆ? | |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಉಪಯೋಗವನ್ನು ಸಾರ್ವಜನಿಕರ ಹಾಗೂ ವಿದ್ಯಾರ್ಥಿಗಳ ಅವಶ್ಯಕತೆಗನುಗುಣವಾಗಿದೆ.<br><br>ಮುಂದಿನ ಆರ್ಥಿಕ ವರ್ಷ 2026-27 ರಲ್ಲಿ ಒಟ್ಟು 1500 ಹೊಸ ಬಸ್ಸುಗಳನ್ನು ಸೇರ್ಪಡೆಗೊಳಿಸಲು ಯೋಜಿಸಲಾಗಿದ್ದು, ನಿಗಮದ ವ್ಯಾಪ್ತಿಯಲ್ಲಿ ಬರುವ ಚಾಮರಾಜನಗರ ವಿಭಾಗದಿಂದ ಬರುವ ವಾಹನಗಳ ಬೇಡಿಕೆಗೆ ಅನುಗುಣವಾಗಿ ಹೊಸ ಬಸ್ಸುಗಳನ್ನು ಮಂಜೂರು ಮಾಡಲು ಕ್ರಮವಹಿಸಲಾಗುವುದು.<br><br>ಮುಂದುವರೆದು, ಸಾರ್ವಜನಿಕ ಪ್ರಯಾಣಿಕರು/ ವಿದ್ಯಾರ್ಥಿಗಳ ಬೇಡಿಕೆಯ ಅನುಸಾರ ಮುಂದಿನ ಶೈಕ್ಷಣಿಕ ಸಾಲಿನಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕ್ರೋಢೀಕರಿಸಿಕೊಂಡು ಇನ್ನೂ ಹೆಚ್ಚಿನ ಸಾರಿಗೆ ಸೌಲಭ್ಯವನ್ನು ಕಲ್ಪಿಸುವ ಸಂಬಂಧ ಆದ್ಯತೆಯ ಮೇರೆಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಟಿಡಿ 12 ಟಿಸಿಕ್ಯೂ 2026

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು